ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(5)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 21/1/21

# ಸಭಾಪತಿ ವಿರುದ್ಧ ಮತ್ತೆ ಬಿಜೆಪಿ ಅವಿಶ್ವಾಸ

## 28ರಿಂದ ಅಧಿವೇಶನ: ಮೇಲ್ಮನೆಯಲ್ಲಿ ಅವಿಶ್ವಾಸ ಮಂಡನೆ । ಪ್ರತಾಪಚಂದ್ರ ವಿರುದ್ಧ ಒಂದಾದ ಬಿಜೆಪಿ, ದಳ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 21/1/21

ವಿಧಾನ ಪರಿಷತ್ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ಅವರ ವಿರುದ್ಧ ಬಿಜೆಪಿ ಸದಸ್ಯರು ಎರಡನೇ ಬಾರಿ ಅವಿಶ್ವಾಸ ನಿರ್ಣಯದ ನೋಟಿಸ್ ಸಲ್ಲಿಸಿದ್ದಾರೆ.

ಈ ಹಿಂದೆ ಬಿಜೆಪಿ ಸದಸ್ಯರು ಸಲ್ಲಿಸಿದ್ದ ನೋಟಿಸ್ ಕ್ರಮಬದ್ಧವಾಗಿಲ್ಲ ಎಂದು ಸಭಾಪತಿಗಳು ತಿರಸ್ಕರಿಸಿದ್ದರು. ಜ.28ರಿಂದ ವಿಧಾನಮಂಡಲದ ಅಧಿವೇಶನ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಬಿಜೆಪಿಯ ಆಯನೂರು ಮಂಜುನಾಥ್ ಸೇರಿದಂತೆ 10 ಸದಸ್ಯರು ಪುನಃ ಸಭಾಪತಿಗಳ ವಿರುದ್ಧ ಅವಿಶ್ವಾಸ ನಿರ್ಣಯ ನೋಟಿಸ್ ಅನ್ನು ಕಾರ್ಯದರ್ಶಿಗಳಿಗೆ ಸಲ್ಲಿಸಿದ್ದಾರೆ. ಈ ಮಧ್ಯೆ, ಬೆಂಗಳೂರಿನಲ್ಲಿ ಮಾತಾಡಿದ ಜೆಡಿಎಸ್ ಸದಸ್ಯ ಬಸವರಾಜ ಹೊರಟ್ಟಿ ಬಿಜೆಪಿ ಸಲ್ಲಿಸಿರುವ ಅವಿಶ್ವಾಸ ನಿರ್ಣಯ ಮಂಡನೆಗೆ ಬೆಂಬಲ ಇದೆ. ವರಿಷ್ಠರು ಹೇಳಿದ ತಕ್ಷಣ ಪಕ್ಷದ ಸದಸ್ಯರ ಸಹಿ ಇರುವ ಅವಿಶ್ವಾಸ ನಿರ್ಣಯ ನೋಟೀಸನ್ನು ಪರಿಷತ್ ಕಾರ್ಯದರ್ಶಿಗೆ ಸಲ್ಲಿಸುವುದಾಗಿ ಹೇಳಿದ್ದಾರೆ.

## ನನ್ನ ಸಭಾಪತಿ ಮಾಡಲು ಗೌಡ, ಎಚ್‌ಡಿಕೆ ನಿರ್ಧಾರ



**ಬೆಂಗಳೂರು:** ರಾಜ್ಯ ವಿಧಾನಪರಿಷತ್‌ನ ಸಭಾಪತಿ ಸ್ಥಾನ ಪಡೆಯುವ ಬಯಕೆ ಜೆಡಿಎಸ್‌ಗೆ ಇದೆ. ನಾವೇನೂ ಸನ್ಯಾಸಿಗಳಲ್ಲ ಎಂದು ಎಂದು ವಿಧಾನಪರಿಷತ್ ಸದಸ್ಯ ಬಸವರಾಜ್ ಹೊರಟ್ಟಿ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಬಿಜೆಪಿಯ 31 ಸದಸ್ಯರು ಮೇಲ್ಮನೆಯಲ್ಲಿದ್ದರೆ ನಾವು 14 ಸದಸ್ಯರಿದ್ದೇವೆ. ಬಿಜೆಪಿಯವರು ಸಭಾಪತಿ ಸ್ಥಾನ ಬಿಟ್ಟುಕೊಡುವಂತೆ ಕೇಳಬಹುದು. ಏನೇ ಮಾಡಬೇಕಿದ್ರೂ ನಮ್ಮ ಬೆಂಬಲ ಬೇಕಲ್ಲವೇ? ಹೀಗಾಗಿ ಸಭಾಪತಿ ಸ್ಥಾನ ಜೆಡಿಎಸ್‌ಗೆ ಸಿಗಲಿದೆ ಎಂದರು.

ಇನ್ನು ನಾನು ಮೇಲ್ಮನೆಗೆ ಸಭಾಪತಿಯಾಗಬೇಕು ಎಂಬುದರ ಬಗ್ಗೆ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಮತ್ತು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಸ್ಪಷ್ಟತೆ ಇದೆ. ಈಗಾಗಲೇ ದೇವೇಗೌಡರು ನನ್ನನ್ನು ಸಭಾಪತಿ ಮಾಡುವ ತೀರ್ಮಾನ ಮಾಡಿದ್ದಾರೆ ಎಂದರು.

**ಇಂದು ಸದನ ಸಮಿತಿ ಸಭೆ:** ಕಳೆದ ಡಿ.15ರಂದು ವಿಧಾನ ಪರಿಷತ್‌ನಲ್ಲಿ ನಡೆದ ಅಹಿತಕರ ಘಟನೆ ಸಂಬಂಧ ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಸದನ ಸಮಿತಿ ಸಭೆ ಗುರುವಾರ ಬೆಳಗ್ಗೆ 11 ಗಂಟೆಗೆ ಶಾಸಕರ ಭವನದಲ್ಲಿ ನಡೆಯಲಿದೆ. ಸಮಿತಿ ಅಧ್ಯಕ್ಷ ಜೆಡಿಎಸ್ ಸದಸ್ಯ ಮರಿತಿಬ್ಬೇಗೌಡ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.